ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಮಾನ್ಯ ಸಭಾಧ್ಯಕ್ಷರು

ಪತ್ರಿಕೆಯ ಹೆಸರು : NAME OF THE NEWS PAPER : ಕನ್ನಡ ಪ್ರಭ    ದಿನಾಂಕ : DATE : 20/07/2019

# ಹೇಗೆ ಬೆಳೆದಿರ್ತಾರೋ ಹಾಗೆ ಮಾತಾಡ್ತಾರೆ: ಸ್ಪೀಕರ್ ಕಿಡಿ

ಕ.ಪ್ರ 20/7/19

ಬೆಂಗಳೂರು: 'ಯಾರು ಹೇಗೆ ಬೆಳೆದು ಬಂದಿರುತ್ತಾರೋ, ಬೆಳೆಯುವ ಹಾದಿ, ನಡತೆ ಹಾಗೂ ಸ್ವಭಾವ ಹೇಗಿರುತ್ತದೆಯೋ ಅದಕ್ಕೆ ಅನುಗುಣವಾಗಿ ಮಾತನಾಡುತ್ತಾರೆ. ನಾನು ಅವರನ್ನು ಮಹಿಳೆ ಎಂಬ ಕಾರಣಕ್ಕೆ ಗೌರವಿಸುತ್ತೇನೆ.' ತಮ್ಮನ್ನು ಕಾಂಗ್ರೆಸ್ ಏಜೆಂಟ್ ಎಂದು ಆರೋಪಿಸಿದ ಬಿಜೆಪಿ ಸಂಸದೆ ಶೋಭಾ ಕರಂದ್ಲಾಜೆ ಅವರಿಗೆ ವಿಧಾನಸಭೆ ಸ್ಪೀಕರ್ ಕೆ.ಆರ್. ರಮೇಶ್ ಕುಮಾರ್ ನೀಡಿದ ತಿರುಗೇಟು ಇದು. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ರಮೇಶ್ ಕುಮಾರ್, ಅವರವರು ಬೆಳೆದು ಬಂದ ಹಾದಿ, ಸ್ವಭಾವದಂತೆ ಮಾತನಾಡುತ್ತಾರೆ. ನಾನು ಅವರಿಂದ ಕಲಿಯಬೇಕಿರುವುದು ಏನೂ ಇಲ್ಲ. ನನಗೆ ಮಾರ್ಗದರ್ಶನ ಮಾಡುವ ಹಿರಿಯರು ಬೇರೆ ಇದ್ದಾರೆ. ಸಾರ್ವಜನಿಕ ಜೀವನದಲ್ಲಿ ಇರಲು ಎಲ್ಲರಿಗೂ ಅವಕಾಶ ಇದೆ. ಆದರೆ, ನನಗೆ ಹಾಗೂ ಅವರಿಗೆ ಹೊರಗಡೆ ಜನರಿದ್ದಾರೆ ಎಂಬ ಭಯವಾದರೂ ಇರಬೇಕು. ಆ ಭಯ ಇಲ್ಲ ಎಂದರೆ ಏನೂ ಮಾಡಲು ಆಗುವುದಿಲ್ಲ ಎಂದರು.



4